ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE : 26/3/2021

# ಅಧಿವೇಶನದಲ್ಲಿ ಧರಣಿ, ಪ್ರತಿಭಟನೆ ಬಗ್ಗೆ ಆಕ್ಷೇಪ

ಬೆಂಗಳೂರು: ವಿಧಾನಸಭೆ ಅಧಿವೇಶನ ಸುಸೂತ್ರವಾಗಿ ನಡೆಯಲು ಆಡಳಿತ ಪಕ್ಷದಷ್ಟೇ ಜವಾಬ್ದಾರಿ ಪ್ರತಿಪಕ್ಷಕ್ಕೂ ಇದ್ದು ಕಲಾಪ ಮೊಟಕುಗೊಳಿಸುವ ಸ್ಥಿತಿ ನಿರ್ಮಾಣ ಮಾಡಿದ ಕಾಂಗ್ರೆಸ್ ವರ್ತನೆ ಬಗ್ಗೆ ಬೇಸರವಿದೆ ಎಂದು ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಪ್ರತಿ ವಿಷಯದಲ್ಲೂ ಸದನವನ್ನು ರಾಜಕೀಯ ವೇದಿಕೆ ಮಾಡಿಕೊಳ್ಳುವ ಮನಸ್ಥಿತಿಗೆ ಹೋಗಬಾರದಿತ್ತು. ಅಂತಹ ವಾತಾವರಣ ನಿರ್ಮಾಣವಾಗಿದ್ದು ಸರಿಯಲ್ಲ ಎಂದು ಅಸಮಾಧಾನ ಹೊರಹಾಕಿದರು.

ಒಂದು ರಾಷ್ಟ್ರ -ಒಂದು 'ಚುನಾವಣೆ ವಿಚಾರದಲ್ಲೂ ಚರ್ಚೆಗೆ ಸಿದ್ಧರಿಲ್ಲ. ಈ ವಿಚಾರದಲ್ಲಿ ಆರ್‌ಎಸ್‌ಎಸ್ ಅಜೆಂಡಾ ಏನು ಅರ್ಥವಾಗಲಿಲ್ಲ. ಅವರ ಏನೇ ವಿರೋಧ ಇದ್ದರೂ ಚರ್ಚೆಯಲ್ಲಿ ಪಾಲ್ಗೊಂಡು ಮಾತನಾಡಬಹುದಿತ್ತಲ್ಲವೇ ಎಂದು ಪ್ರಶ್ನಿಸಿದರು.

ಸದನ ಸುಸೂತ್ರವಾಗಿ ನಡೆಯುವ ವಿಚಾರದಲ್ಲಿ ನಾನು ಕರೆದ ಕಲಾಪ ಸಲಹಾ ಸಮಿತಿಗೂ ಕಾಂಗ್ರೆಸ್ ನಾಯಕರು ಗೈರುಹಾಜರಾಗಿದ್ದರು. ರಾಜಕೀಯ ವಿಚಾರ ಸದನದ ಹೊರಗೆ ಇಟ್ಟುಕೊಳ್ಳಿ, ನಿಮ್ಮದೇ ರೀತಿ ಹೋರಾಟ ಮಾಡಿಕೊಳ್ಳಿ ಎಂದು ಹೇಳಿದರೂ ಸದನ ನಡೆಸಲು ಬಿಡದೆ ಇತರೆ ಸದಸ್ಯರ ಹಕ್ಕು ಮೊಟಕುಗೊಳಿಸಿದ್ದು ಅಕ್ಷಮ್ಯ ಎಂದು ಹೇಳಿದರು.

## ಸುಧಾಕರ್ ಹೇಳಿಕೆ: ಕ್ರಮದ ಬಗ್ಗೆ ಚರ್ಚೆ



ಬೆಂಗಳೂರು: ಸಚಿವ ಡಾ.ಕೆ.ಸುಧಾಕರ್ ಹೇಳಿಕೆ ಸಂಬಂಧ ನನ್ನ ವ್ಯಾಪ್ತಿಯಲ್ಲಿ ಯಾವ ರೀತಿಯ ಕ್ರಮ ಕೈಗೊಳ್ಳಬಹುದು ಎಂಬ ಬಗ್ಗೆ ಚರ್ಚಿಸಲಾಗುವುದು ಎಂದು ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಹೇಳಿದ್ದಾರೆ. ಸುದ್ದಿಗಾರರ ಜತೆ ಮಾತನಾಡಿ, ಆ ವಿಚಾರದ ಬಗ್ಗೆ ಸದನದಲ್ಲೂ ನಾನು ಸ್ಪಷ್ಟವಾಗಿ ಹೇಳಿದ್ದೇನೆ. ಆದಾದ ನಂತರ ಸುಧಾಕರ್ ಅವರು ಪತ್ರ ಬರೆದು ವಿಷಾದ ವ್ಯಕ್ತಪಡಿಸಿದ್ದಾರೆ. ಕಾಂಗ್ರೆಸ್ ಪಕ್ಷದಿಂದ ನನಗೆ ದೂರು ನೀಡಲಾಗಿದೆ. ಆ ಬಗ್ಗೆ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.